ಮೂಲಕ ಉತ್ತರಿಸುವ 55 ಪ್ರಶ್ನೆಗಳ ಪೈಕಿ 47 ಪ್ರಶ್ನೆಗಳಿಗೆ ಉತ್ತರಗಳನ್ನು ಹಾಗೂ ದಿನಾಂಕ 30–06–2010ರ 3ನೇ ಪಟ್ಟಿಯಿಂದ ಸದನದಲ್ಲಿ ಉತ್ತರಿಸುವ 15 ಪ್ರಶ್ನೆಗಳ ಉತ್ತರಗಳನ್ನು ಮತ್ತು ಲಿಖಿತ ಮೂಲಕ ಉತ್ತರಿಸುವ 39 ಪ್ರಶ್ನೆಗಳ ಪೈಕಿ 36 ಪ್ರಶ್ನೆಗಳಿಗೆ ಉತ್ತರಗಳನ್ನು ಸದನದ ಮುಂದೆ ಮಂಡಿಸುತ್ತಿದ್ದೇನೆ.

**ಅಧ್ಯಕ್ಷರು:** ಮಂಡಿಸಲಾಯಿತು. ಅನುಬಂಧ (ಅ)

**3. ಸಭೆಯ ಮುಂದಿಡಲಾದ ಕಾಗದ ಪತ್ರಗಳು:**

**ಶ್ರೀ ಜಗದೀಶ್ ಶೆಟ್ಟರ್ (ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಸಚಿವರು)(ಮುಖ್ಯಮಂತ್ರಿಯವರ ಪರವಾಗಿ):**

i) ಭಾರತ ಸಂವಿಧಾನ 151(2)ನೇ ಅನುಚ್ಛೇದದ ಮೇರೆಗೆ 31ನೇ ಮಾರ್ಚ್ 2009ಕ್ಕೆ ಕೊನೆಗೊಂಡ ವರ್ಷಕ್ಕೆ ಭಾರತದ ನಿಯಂತ್ರಕರ ಮತ್ತು ಮಹಾಲೆಕ್ಕ ಪರಿಶೋಧಕರು ನೀಡಿರುವ (ರಾಜ್ಯ ಸರ್ಕಾರದ ಹಣಕಾಸಿನ ವ್ಯವಹಾರಗಳು) ವರದಿಯನ್ನು ಸಭೆಯ ಮುಂದೆ ಮಂಡಿಸುತ್ತಿದ್ದೇನೆ.

ii) ಭಾರತ ಸಂವಿಧಾನದ 151(2)ನೇ ಅನುಚ್ಛೇದದ ಮೇರೆಗೆ 31ನೇ ಮಾರ್ಚ್ 2009ಕ್ಕೆ ಕೊನೆಗೊಂಡ ವರ್ಷಕ್ಕೆ ಭಾರತದ ನಿಯಂತ್ರಕರು ಮತ್ತು ಮಹಾಲೆಕ್ಕ ಪರಿಶೋಧಕರು ನೀಡಿರುವ ಮಾಹಿತಿ ವ್ಯವಸ್ಥೆಗಳ ಲೆಕ್ಕಪರಿಶೋಧನೆ ವರದಿಯನ್ನು ಸಭೆಯ ಮುಂದೆ ಮಂಡಿಸುತ್ತಿದ್ದೇನೆ.

**ಶ್ರೀ ಜಗದೀಶ್ ಶೆಟ್ಟರ್ (ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಸಚಿವರು):**

**I ಶ್ರೀ ಬಿ.ಎಸ್.ಯಡಿಯೂರಪ್ಪ, ಮಾನ್ಯ ಮುಖ್ಯಮಂತ್ರಿಗಳ ಪರವಾಗಿ:–**

**(iii) 1957ರ ಕರ್ನಾಟಕ ಮಾರಾಟ ತೆರಿಗೆ ಕಾಯ್ದೆಯ ಪ್ರಕರಣ 39ರ ಮೇರೆಗೆ:**

1. ದಿನಾಂಕ 05.07.2002ರಂದು ಹೊರಡಿಸಲಾಗಿದ್ದ ಅಧಿಸೂಚನೆ ಸಂಖ್ಯೆ ಎಫ್‌ಡಿ 31 ಸಿಎಸ್‌ಎಲ್ 2002 ರಲ್ಲಿ ವಿವರಿಸಿದಂತೆ ಕರ್ನಾಟಕ ಸರ್ಕಾರವು **"ರಿಲಯನ್ಸ್ ಇಂಡಸ್ಟ್ರೀಸ್ ಲಿಮಿಟೆಡ್"** ಅನ್ನು ಒಂದು **ತೈಲ ಕಂಪನಿ** ಎಂದು ನಿರ್ದಿಷ್ಟ ಉದ್ದೇಶಕ್ಕಾಗಿ ಪರಿಗಣಿಸಲು ದಿನಾಂಕ 24.03.2010ರಂದು ಹೊರಡಿಸಲಾಗಿರುವ ಎಫ್‌ಡಿ 50 ಸಿಎಸ್‌ಎಲ್ 2010ರ ಅಧಿಸೂಚನೆ.